ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಕೋವಿಡ್-19ರ ಹಿನ್ನೆಲೆಯಲ್ಲಿ ಪ್ರಸಕ್ತ ಸಾಲಿನ ಶೈಕ್ಷಣಿಕ ವ್ಯವಸ್ಥೆಯ ಕುರಿತು

ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ(ನಾಮನಿರ್ದೇಶನ ಹೊಂದಿದವರು) -

53 (29) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿ 2019-20ನೇ ಶೈಕ್ಷಣಿಕ ಸಾಲಿನಲ್ಲಿ ಯಾವ ಯಾವ ತರಗತಿಗಳ ವಿದ್ಯಾರ್ಥಿಗಳಿಗೆ ಪರೀಕ್ಷೆಯನ್ನು ನಡೆಸಿ ಫಲಿತಾಂಶವನ್ನು ನೀಡಲಾಗಿರುತ್ತದೆ; ಯಾವ ಯಾವ ತರಗತಿಗಳ ವಿದ್ಯಾರ್ಥಿಗಳಿಗೆ ಪರೀಕ್ಷೆಯನ್ನು ನಡೆಸದೆಯೇ ಫಲಿತಾಂಶವನ್ನು ನೀಡಲಾಗಿರುತ್ತದೆ;

(ಆ) ರಾಜ್ಯದಲ್ಲಿ 2020-21ನೇ ಶೈಕ್ಷಣಿಕ ಸಾಲಿನ ಅರ್ಧ ಶೈಕ್ಷಣಿಕ ವರ್ಷವು ಮುಕ್ತಾಯವಾಗಿರುವ ಹಿನ್ನೆಲೆಯಲ್ಲಿ ಪ್ರಮುಖವಾಗಿ ಹತ್ತನೇ ತರಗತಿ ಮತ್ತು ಪಿಯುಸಿ ತರಗತಿಯ ವಿದ್ಯಾರ್ಥಿಗಳಿಗೆ ಯಾವ ಪಠ್ಯಕ್ರಮವನ್ನು ಯೋಜಿಸಲಾಗಿದೆ;

(ಇ) ಕೋವಿಡ್-19ರ ಹಿನ್ನೆಲೆಯಲ್ಲಿ ಶಾಲೆಯನ್ನು ಪ್ರಾರಂಭಿಸದ ಕಾರಣದಿಂದ ಖಾಸಗಿ ಶಾಲೆಗಳ ಬೋಧನಾ ಶುಲ್ಕದಲ್ಲಿ ರಿಯಾಯಿತಿಯನ್ನು ನೀಡಲಾಗಿದೆಯೇ; ಇಲ್ಲವಾದಲ್ಲಿ, ಈ ಬಗ್ಗೆ ಸರ್ಕಾರ ಯಾವ ಚಿಂತನೆಯನ್ನು ಹೊಂದಿದೆ; ಖಾಸಗಿ ಶಾಲೆಗಳು ಶಾಲಾ ಪ್ರಾರಂಭಿಸದೆ ಶುಲ್ಕವನ್ನು ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ರಾಜ್ಯದಲ್ಲಿ ಕೋವಿಡ್-19ರ ನಿಯಂತ್ರಣಕ್ಕಾಗಿ ಶಾಲೆಯನ್ನು ಪ್ರಾರಂಭಿಸದ ಹಿನ್ನೆಲೆಯಲ್ಲಿ ಯಾವ ಯಾವ ತರಗತಿಯ ವಿದ್ಯಾರ್ಥಿಗಳಿಗೆಆನ್‌ಲೈನ್‌ಶಿಕ್ಷಣಕ್ಕೆಅವಕಾಶವನ್ನು ನೀಡಲಾಗಿರುತ್ತದೆ; ಆನ್‌ಲೈನ್ ಶಿಕ್ಷಣ ವ್ಯವಸ್ಥೆಯನ್ನು ಹೊಂದಲಾರದ ಗ್ರಾಮೀಣ ಪ್ರದೇಶದ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳಿಗೆ ಯಾವ ರೀತಿಯ ಪೂರಕ ಕ್ರಮವನ್ನು ಕೈಗೊಳ್ಳಲಾಗಿರುತ್ತದೆ?